ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ರಿಂದ 8ವರೆಗೆ

ಅಧ್ಯಕ್ಷರು : "ಖಂಡ 2 ರಿಂದ 8ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 8 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವನೆ ಅಂಗೀಕಾರ

ಶ್ರೀ ಆರ್. ಎಲ್. ಜಾಲಪ್ಪ (ಮಾನ್ಯ ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1995ರ, ಕರ್ನಾಟಕ ಭೂ ಸುಧಾರಣೆ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1995ರ ಕರ್ನಾಟಕ ಭೂ ಸುಧಾರಣೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

4 ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕ, 1955.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ವೈಜನಾಥಪಾಟೀಲ್ (ನಗರಾಭಿವೃದ್ಧಿ, ಕಾಡಾ, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೇ, 1995ರ ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

(1995ನೇ ಸಾಲಿನ ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು).

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 9 ರವರೆಗೆ

ಅಧ್ಯಕ್ಷರು : "ಖಂಡ 2 ರಿಂದ 9ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ರಿಂದ 9ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವದ ಅಂಗೀಕಾರ

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ, ಕಾಡಾ, ಹೈದರಾಬಾದ್ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸಚಿವರು) : 1995ರ ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

5 ಕರ್ನಾಟಕ ಪೌರಸಭೆಗಳ (ಎರಡನೇ ತಿದ್ದುಪಡಿ) ವಿಧೇಯಕ, 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ, ಕಾಡಾ, ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೇ, 1995ನೇ ಸಾಲಿನ ಕರ್ನಾಟಕ ಪೌರಸಭೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,